ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 22-03-2021 ಪ್ರಶ್ನೆ ಸಂಖ್ಯೆ : 1581 (1744)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 22-03-2021

ಉತ್ತರಿಸುವ ಸಚಿವರು : ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು

ವಿಷಯ : ವೈದ್ಯಕೀಯ ಶಿಕ್ಷಣ ವಿದ್ಯಾಲಯಗಳ ಪ್ರವೇಶಾತಿ ಕುರಿತು

(ಅ) ವೈದ್ಯಕೀಯ ಮಹಾವಿದ್ಯಾಲಯಗಳಲ್ಲಿ ವಿದ್ಯಾರ್ಥಿಗಳ ಪ್ರವೇಶಾತಿಯನ್ನು 100 ವಿದ್ಯಾರ್ಥಿಗಳಿಂದ 250ಕ್ಕೆ ಹೆಚ್ಚಿಸಲು ಇರಬೇಕಾದ ಕನಿಷ್ಠ ಮೂಲಭೂತ ಸೌಕರ್ಯಗಳು ಯಾವುವು; (ವಿವರದೊಂದಿಗೆ ಮಾಹಿತಿ ನೀಡುವುದು)

(ಆ) 2021-22ನೇ ಶೈಕ್ಷಣಿಕ ವರ್ಷದಲ್ಲಿ ಎಷ್ಟು ವೈದ್ಯಕೀಯ ಮಹಾವಿದ್ಯಾಲಯಗಳಲ್ಲಿ ವಿದ್ಯಾರ್ಥಿಗಳ ಪ್ರವೇಶಾತಿಯನ್ನು 100 ವಿದ್ಯಾರ್ಥಿಗಳಿಂದ 250ಕ್ಕೆ ಹೆಚ್ಚಿಸಲು ಅನುಮತಿಸಿದೆಯೇ; (ಹೆಸರಿನೊಂದಿಗೆ ಜಿಲ್ಲಾವಾರು ಮಾಹಿತಿ ನೀಡುವುದು)

(ಇ) 2021-2022ರ ಶೈಕ್ಷಣಿಕ ಸಾಲಿನಲ್ಲಿ ರಾಜ್ಯದಲ್ಲಿ ಎಷ್ಟು ಹೊಸ ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭಿಸಲಾಗುವುದು; ಈ ಕಾಲೇಜುಗಳಲ್ಲಿ ಎಷ್ಟು ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶವನ್ನು ಕಲ್ಪಿಸಲಾಗುವುದು ; (ಹೆಸರಿನೊಂದಿಗೆ ಮಾಹಿತಿ ನೀಡುವುದು)

(ಈ) ವೈದ್ಯಕೀಯ ಮಹಾವಿದ್ಯಾಲಯಗಳಲ್ಲಿ ವಿದ್ಯಾರ್ಥಿಗಳ ಪ್ರವೇಶಾತಿಯನ್ನು 100 ವಿದ್ಯಾರ್ಥಿಗಳಿಂದ 250ಕ್ಕೆ ಹೆಚ್ಚಿಸಲು ಸದರಿ ಕಾಲೇಜಿನ ಆಸ್ಪತ್ರೆಯ ಎಷ್ಟು ಹಾಸಿಗೆಗಳ ಸೌಕರ್ಯವನ್ನು ಹೊಂದಿರಬೇಕಾಗಿದೆ ?